# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ&ಅ:2022-23|3355 ದಿನಾಂಕ:26.09.2022

## : ಸುತ್ತೋಲೆ :

ವಿಷಯ: ದಿನಾಂಕ:29.09.2022 ರಂದು ಆಯೋಜಿಸಿರುವ CAS ವೃತ್ತಿ ಪದೋನ್ನತಿ ಕುರಿತಾದ ಕಾರ್ಯಾಗಾರದಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:19.09.2022

* * * * *

ತುಮಕೂರು ವಿಶ್ವವಿದ್ಯಾನಿಲಯದ Internal Quality Assurance Cell (IQAC) ಹಾಗೂ Planning Monitoring and Evaluation Board (PMEB) ವಿಭಾಗಗಳ ವತಿಯಿಂದ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು ಹಾಗೂ ಘಟಕ ಕಾಲೇಜುಗಳಲ್ಲಿನ ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಉಪಗ್ರಂಥಪಾಲಕರು, ಸಹಾಯಕ ಗ್ರಂಥಪಾಲಕರು ಹಾಗೂ ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕರುಗಳಿಗೆ **CAS ವೃತ್ತಿ ಪದೋನ್ನತಿಗೆ ಸಂಬಂಧಿಸಿದಂತೆ ಒಂದು ದಿನದ ಕಾರ್ಯಾಗಾರವನ್ನು ದಿನಾಂಕ:29.09.2022 ರಂದು ಬೆಳಿಗ್ಗೆ 10.30 ಕ್ಕೆ ವಿಶ್ವವಿದ್ಯಾನಿಲಯದ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ** ಆಯೋಜಿಸಲಾಗಿದ್ದು, ಕಾರ್ಯಾಗಾರದಲ್ಲಿ **ಪ್ರೊ. ಸೈಯದ್ ಅಶ್ಫಕ್ ಅಹಮದ್**, ಪ್ರಾಧ್ಯಾಪಕರು, ಸ್ನಾತಕೋತ್ತರ ಅನ್ವಯಿಕ ಭೂವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ತುಮಕೂರು ಇವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ.

ಈ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು ಹಾಗೂ ಘಟಕ ಕಾಲೇಜುಗಳಲ್ಲಿನ ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಉಪಗ್ರಂಥಪಾಲಕರು, ಸಹಾಯಕ ಗ್ರಂಥಪಾಲಕರು ಹಾಗೂ ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕರು **ದಿನಾಂಕ:29.09.2022 ರಂದು ಬೆಳಗ್ಗೆ 10.00 ಗಂಟೆಗೆ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ** ಹಾಜರಿದ್ದು, ಕಾರ್ಯಾಗಾರದಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ತಿಳಿಸಲಾಗಿದೆ.

ಘಟಕ ಕಾಲೇಜುಗಳ ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಾಧ್ಯಾಪಕರು ಕಾರ್ಯಾಗಾರದಲ್ಲಿ ಭಾಗವಹಿಸಲು ಅನುವಾಗುವಂತೆ ಸದರಿ ದಿನದ ಬೋಧನಾ ಕಾರ್ಯಭಾರವನ್ನು ಅತಿಥಿ ಉಪನ್ಯಾಸಕರುಗಳಿಂದ ನಿರ್ವಹಿಸಲು ಪ್ರಾಂಶುಪಾಲರು ಅಗತ್ಯ ಕ್ರಮವಹಿಸುವುದು.

ಸದರಿ ಮಾಹಿತಿಯನ್ನು ತಮ್ಮ ಅಧೀನದಲ್ಲಿನ ಎಲ್ಲಾ ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಸಹಾಯಕ ಗ್ರಂಥಪಾಲಕರು ಮತ್ತು ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕರ ಗಮನಕ್ಕೆ ತರಲು ಕೋರಿದೆ.

ಆದೇಶದ ಮೇರೆಗೆ

D. Sumesh 26/09/2022

ಉಪಕುಲಸಚಿವರು

ಸಾಮಾನ್ಯ ಮತ್ತು ಅಭಿವೃದ್ಧಿ ವಿಭಾಗ

ತುಮಕೂರು ವಿಶ್ವವಿದ್ಯಾಲಯ

ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
3. ಉಪಗ್ರಂಥಪಾಲಕರು, ವಿಶ್ವವಿದ್ಯಾನಿಲಯ ಗ್ರಂಥಾಲಯ, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿಗಳು:

1. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ನಿರ್ದೇಶಕರು, IQAC, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ನಿರ್ದೇಶಕರು, PMEB, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: (ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಎಲ್ಲಾ ಸಹ ಪ್ರಾಧ್ಯಾಪಕರು & ಸಹಾಯಕ ಪ್ರಾಧ್ಯಾಪಕರಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)
5. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ.